ಪಶ್ಚಿಮ ವಲಯ ವ್ಯಾಪ್ತಿಯ, ಮಲ್ಲೇಶ್ವರಂ ಉಪವಿಭಾಗದ ಗಾಯತ್ರಿನಗರ ವಾರ್ಡ್-76ರಲ್ಲಿ
ದಿನಾಂಕ: 16-12-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ

## ಸಭಾ ನಡವಳಿಗಳು

ಸಮಯ ಮಧ್ಯಾಹ್ನ ಘಂಟೆಗೆ

ವಾರ್ಡ್ ಸಂಖ್ಯೆ-76 ಗಾಯತ್ರಿನಗರ

ದಿನಾಂಕ: 16-12-2021 ರಂದು ವಾರ್ಡ್ ಸಂಖ್ಯೆ 76ರ ಡಿಸೆಂಬರ್ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ವಾರ್ಡ್ ಸಂಖ್ಯೆ 76ರ ಸಹಾಯಕ ಅಭಿಯಂತರರು ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತವನ್ನು ಕೋರಿದರು ಹಾಗೂ ಸದಸ್ಯರುಗಳೆಲ್ಲರ ಕಿರು ಪರಿಚಯ ತಿಳಿಸಿ, ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಕೊಂಡು ಸಭೆ ನಡೆಸಲು ಕೋರಿದರು.

ಸಭೆಗೆ ಹಾಜರಿದ್ದವರು :

| | |
|---|---|
| 1 | ಶ್ರೀ ಚಂದ್ರಶೇಖರ್. ಹೆಚ್.ಆರ್. ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್-76 ಗಾಯತ್ರಿನಗರ |
| 2 | ಶ್ರೀ ಚಿಕ್ಕಗೂಳಿಗೌಡ.ಜಿ.ಜಿ. ಸಹಾಯಕ ಅಭಿಯಂತರರು. ವಾರ್ಡ್-76 ಗಾಯತ್ರಿನಗರ ಹಾಗೂ ಕಾರ್ಯದರ್ಶಿ |
| 3 | ಶ್ರೀ ಕನಕರಾಜು, ಕಂದಾಯ ಪರಿವೀಕ್ಷಕರು |
| 4 | ಶ್ರೀಮತಿ ಶಾರದಾ ಬಾಯಿ. |
| 5 | ಡಾ|| ಅಂಜನಾ, ಆರೋಗ್ಯ ಅಧಿಕಾರಿ |
| 6 | ಶ್ರೀ ಆರ್.ಸಂತೋಷ್. ಕಲಸ ಪರಿವೀಕ್ಷಕರು |
| 7 | ಶ್ರೀ ಮಂಜುನಾಥ್. ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 8 | ಶ್ರೀಮತಿ ಕೃಪಾ ಪ್ರಕಾಶ್. ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 9 | ಶ್ರೀ ಸಂತೋಷ್. ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 10 | ಶ್ರೀ ರಂಗನಾಥ್. ಬೆಸ್ಕಾಂ. ಜೆ.ಇ |
| 11 | ಶ್ರೀ ಸಿದ್ದರಾಜು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 12 | ಶ್ರೀ ಕೊಂಡಯ್ಯ, ಆರೋಗ್ಯ ಪರಿವೀಕ್ಷಕರು |
| 13 | ಶ್ರೀ ಈಶ್ವರ್ ಗೌಡ. ವಾರ್ಡ್ ಅಧ್ಯಕ್ಷ |

ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ಶ್ರೀ ಚಂದ್ರಶೇಖರ್.ಹೆಚ್.ಆರ್ ನೋಡಲ್ ಅಧಿಕಾರಿಗಳು ವಾರ್ಡ್-76 ಇವರು ಸಭೆಯನ್ನು ಮುಂದುವರೆಸಲು ಸೂಚಿಸಿದರು.

ಆರೋಗ್ಯ ಇಲಾಖೆ :

- ಸಭೆಯಲ್ಲಿ ಹಾಜರಿದ್ದ ಆರೋಗ್ಯಾಧಿಕಾರಿಗಳು ವಾರ್ಡ್-76ರ ವ್ಯಾಪ್ತಿಯಲ್ಲಿ ಯಾವುದೇ ಕೋವಿಡ್-19ರ ಪ್ರಕರಣಗಳಿಲ್ಲವೆಂದು ತಿಳಿಸಿದರು ಹಾಗೂ ಯಾವುದೇ ಡೆಂಗ್ಯೂ ಮಲೇರಿಯಾ ಪ್ರಕರಣಗಳಿಲ್ಲವೆಂದು ತಿಳಿಸಿದರು. ವಾರ್ಡ್-76ರ ಗಾಯಿತ್ರಿನಗರ ವ್ಯಾಪ್ತಿಯಲ್ಲಿ 95% ವ್ಯಾಕ್ಸಿನೇಷನ್ ನೀಡಲಾಗಿದೆ ಎಂದು ತಿಳಿಸಿದರು. ವ್ಯಾಕ್ಸಿನೇಷನ್‌ನನ್ನು 36025 ನೀಡಲಾಗಿದೆ ಎಂದು ತಿಳಿಸಿದರು. ಕೋವಿಡ್-19 ನಿಂದ ಮೃತಪಟ್ಟವರಿಗೆ ಪರಿಹಾರ ನೀಡಲು ಸರ್ವೆ ಕಾರ್ಯ ನಡೆಸಲಾಗುತ್ತಿದೆ ಎಂದು ತಿಳಿಸಿದರು 11562 ಮನೆಗಳ ವ್ಯಾಕ್ಸಿನೇಷನ್ ಸರ್ವೆ ಕಾರ್ಯ ನೀಡಲಾಗುತ್ತಿದೆ ಎಂದು ತಿಳಿಸಿದರು. 22 ಜನರಿಗೆ ಬಾಕಿ ವ್ಯಾಕ್ಸಿನೇಷನ್ ನೀಡಬೇಕಾಗಿದೆ ಎಂದು ತಿಳಿಸಿದರು. ಅಂಗಡಿಗಳು-40, ಹೋಟೆಲ್-24, ಬ್ಯಾಂಕ್‌ಗಳು-4 ಇದ್ದು, ವ್ಯಾಕ್ಸಿನೇಷನ್ ನೀಡಲಾಗುತ್ತಿದೆ ಎಂದು ತಿಳಿಸಿದರು.

ಆರೋಗ್ಯ ಇಲಾಖೆ (ಘನತ್ಯಾಜ್ಯ):

- ಸಭೆಯಲ್ಲಿ ಹಾಜರಿದ್ದ ಆರೋಗ್ಯಾಧಿಕಾರಿಗಳು ಕರ್ನ್ಸವೆನ್ಸಿಯಲ್ಲಿರುವ ಕಸವನ್ನು ತೆಗೆಯಲಾಗುತ್ತಿದೆ ಎಂದು ತಿಳಿಸಿದರು. ಮನೆ ಮನೆ ಕಸವನ್ನು ನೀಡುವಾಗ ಸೆಗ್ರಿಗೇಶನ್ ಮಾಡದೇ ನೀಡುತ್ತಿದ್ದು, ಸೆಗ್ರಿಗೇಶನ್ ಮಾಡಿ ಕಸವನ್ನು ನೀಡುವಂತೆ ತಿಳುವಳಿಕೆ ಮೂಡಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು.

ಕಾಮಗಾರಿ ಇಲಾಖೆ

- ವಾರ್ಡ್-76ರ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಅತೀ ಜರೂರಾಗಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಯಿತು.

BWSSB ಇಲಾಖೆ

- ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯುಎಸ್ಎಸ್‌ಬಿ ಅಧಿಕಾರಿರವರಿಗೆ ರಸ್ತೆಗಳನ್ನು ಅಗೆದ ನಂತರ ರೆಸ್ಟೋರೆಶನ್ ಮಾಡುವಂತೆ ಸಭೆಯಲ್ಲಿ ಸೂಚಿಸಲಾಯಿತು. ಹಾಗೂ ರಸ್ತೆಯಲ್ಲಿನ ಮಣ್ಣನ್ನು ತೆರವುಗೊಳಿಸುವಂತೆ ಸೂಚಿಸಲಾಯಿತು. ಕರ್ನ್ಸವೆನ್ಸಿಯಲ್ಲಿ ಕ್ಲೀನ್ ಮಾಡುತ್ತಿದ್ದು ಲೀಕೇಜ್‌ಗಳಿದ್ದರೆ ಮನೆಗಳಿಗೆ ನೋಟಿಸ್ ನೀಡಿ ಸರಿಪಡಿಸುವಂತೆ ಕ್ರಮಕೈಗೊಳ್ಳುವಂತೆ ಬಿಡಬ್ಲ್ಯುಎಸ್ಎಸ್‌ಬಿ ಅಧಿಕಾರಿರವರಿಗೆ ಸಭೆಯಲ್ಲಿ ಸೂಚಿಸಲಾಯಿತು.

ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಕಾರ್ಯದರ್ಶಿಯವರು ವಂದಾನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ,
ಸಹಾಯಕ ಅಭಿಯಂತರರು, ವಾರ್ಡ್-76
ಗಾಯಿತ್ರಿನಗರ, ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ

ಅಧ್ಯಕ್ಷರು
ನೋಡಲ್ ಅಧಿಕಾರಿಗಳು, ವಾರ್ಡ್-76
ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ